ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 553 (628)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ರಾಜ್ಯದ ಎನ್.ಪಿ.ಎಸ್. ನೌಕರರ ಹೊಸ ಪಿಂಚಣಿ ಯೋಜನೆಯ ಬದಲು ಹಳೆಯ ಯೋಜನೆಯನ್ನು ಮುಂದುವರಿಸುವ ಬಗ್ಗೆ

(ಅ) ರಾಜ್ಯದ ಎನ್.ಪಿ.ಎಸ್. ನೌಕರರ ಹೊಸ ಪಿಂಚಣಿ ಯೋಜನೆಯ ಬದಲು ಹಳೆಯ ಯೋಜನೆಯನ್ನೇ ಮುಂದುವರೆಸಲು ಸರ್ಕಾರದ ಮುಂದಿರುವ ಸಮಸ್ಯೆಗಳೇನು; ಎನ್.ಪಿ.ಎಸ್. ನೌಕರರು ಮರಣ ಹೊಂದಿದರೆ ಅವರ ಕುಟುಂಬದವರಿಗೆ ಕೆಲಸ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ; (ಮಾಹಿತಿ ನೀಡುವುದು)

(ಆ) ಎನ್.ಪಿ.ಎಸ್. ನೌಕರರ ವೇತನದಲ್ಲಿ ಶೇ 10 ರಷ್ಟನ್ನು ಕಡಿತಗೊಳಿಸಲಾಗಿದ್ದು, ಇದನ್ನು ಯಾವ ಖಾತೆಗೆ ಜಮಾ ಮಾಡಲಾಗಿದೆ; (ವಿವರ ನೀಡುವುದು)

(ಇ) ಎನ್.ಪಿ.ಎಸ್. ನೌಕರರಿಗೆ ಜಿ.ಪಿ.ಎಫ್. ಖಾತೆ ತೆರೆಯುವ ಕುರಿತು ಸರ್ಕಾರದ ನಿಲುವೇನು; (ವಿವರ ನೀಡುವುದು)

(ಈ) ರಾಜ್ಯದ ಬೇರೆ ಬೇರೆ ಭಾಗಗಳಲ್ಲಿ ಸರ್ಕಾರಿ ಕಛೇರಿಯಲ್ಲಿ ಕೊರತೆಯಿರುವ ಸಿಬ್ಬಂದಿಗಳ ಭರ್ತಿ ಪ್ರಕ್ರಿಯೆ ಪೂರ್ಣವಾಗಿದೆಯೇ? (ವಿವರಗಳೊಂದಿಗೆ ಮಾಹಿತಿ ನೀಡುವುದು)